ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೭**

ಒಟ್ಟು ಪ್ರಶ್ನೆಗಳು – ೧೫

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ: ೨೦ನೇ ಮಾರ್ಚ್, ೨೦೧೭**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೫. ವೈದ್ಯಕೀಯ ಶಿಕ್ಷಣ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೭. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ಚಿಕ್ಕಮಗಳೂರು ಜಿಲ್ಲೆಯ ಗಿರಿಜನ ಕುಟುಂಬಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)–**

೯೧ (೭೬೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಷ್ಟು ಗಿರಿಜನ ಕುಟುಂಬಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಗಿರಿಜನ ಕುಟುಂಬಗಳಿಗೆ ಮಳೆಗಾಲದಲ್ಲಿ ಪೌಷ್ಠಿಕ ಆಹಾರ ಕಾರ್ಯಕ್ರಮ ಯೋಜನೆಯಡಿಯಲ್ಲಿ ಎಷ್ಟು ಅನುದಾನವನ್ನು ನೀಡಲಾಗಿದೆ ; ಈ ಅನುದಾನದಲ್ಲಿ ಎಷ್ಟು ಖರ್ಚು ಮಾಡಲಾಗಿದೆ ಮತ್ತು ಉಳಿಕೆ ಅನುದಾನವೆಷ್ಟು ; ಈ ಕಾರ್ಯಕ್ರಮದ ಯೋಜನೆಯಡಿಯಲ್ಲಿ ಎಲ್ಲಾ ಗಿರಿಜನ ಕುಟುಂಬಗಳಿಗೆ ಸಮರ್ಪಕವಾಗಿ ಆಹಾರ ವಿತರಿಸಲಾಗಿದೆಯೇ ;

(ಇ) ಪರಿಶಿಷ್ಟ ಪಂಗಡ ಎಂದು ಗುರುತಿಸಿರುವ ಎಲ್ಲಾ ಉಪ ಜಾತಿ ಕುಟುಂಬಗಳಿಗೆ ಪೌಷ್ಠಿಕ ಆಹಾರ ವಿತರಣೆ ಮಾಡಲಾಗಿದೆಯೇ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ದಡಾರ ಲಸಿಕೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು)–**

೧೨ (೭೭೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಒಟ್ಟು ಎಷ್ಟು ಮಕ್ಕಳಿಗೆ ದಡಾರ ಲಸಿಕೆಯನ್ನು ಹಾಕಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಲಸಿಕೆ ಹಾಕಿಸದೆ ಇರುವ ಮಕ್ಕಳ ಸಂಖ್ಯೆ ಎಷ್ಟು ; ಲಸಿಕೆ ಹಾಕಿಸದೇ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಲಸಿಕೆ ಹಾಕಿಸದೆ ಇರುವ ಮಕ್ಕಳಿಗೆ ಲಸಿಕೆ ಹಾಕಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಚಿತ್ರದುರ್ಗ ಜಿಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭದ ಬಗ್ಗೆ

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೯೩(೭೯೧) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭ ಯಾವ ಹಂತದಲ್ಲಿದೆ ; (ಮಾಹಿತಿ ಒದಗಿಸುವುದು)

(ಆ) ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭ ವಿಳಂಬ ಆಗುತ್ತಿರಲು ಕಾರಣವೇನು ;

(ಇ) ಚಿತ್ರದುರ್ಗ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲು ಸರ್ಕಾರಕ್ಕೆ ಆಸಕ್ತಿ ಇದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಇದು ಆರಂಭಗೊಳ್ಳಲಿದೆ ? (ಮಾಹಿತಿ ಒದಗಿಸುವುದು)

## ದಡಾರ ಮತ್ತು ರುಬೆಲ್ಲಾ ಎಂಬ ಕಾಯಿಲೆ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೯೪(೭೭೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಡಾರ ಮತ್ತು ರುಬೆಲ್ಲಾ ಎಂಬ ಖಾಯಿಲೆ ಅಪಾಯಕಾರಿ ಖಾಯಿಲೆಯೇ ಎಂಬುದರ ಬಗ್ಗೆ ವೈಜ್ಞಾನಿಕ ಆಧಾರಗಳಿವೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ;

(ಆ) ಸದರಿ ಖಾಯಿಲೆಯು ರಾಜ್ಯದಲ್ಲಿ ಯಾವ ಯಾವ ಜಿಲ್ಲೆಯಲ್ಲಿ ಕಂಡು ಬಂದಿರುತ್ತದೆ ; (ಜಿಲ್ಲಾವಾರು ವಿವರಣೆ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿ ವರ್ಷ ಈ ಮಾರಕ ಖಾಯಿಲೆಗೆ ಬಲಿಯಾಗುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ?

## ಭಿಕ್ಷಾಟನೆ ನಿಯಂತ್ರಣದ ಕುರಿತು

**ಡಾ : ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು)**

೯೫(೮೫೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಿಕ್ಷುಕರು ಅನಾಥ ಮಕ್ಕಳನ್ನು ವಾಮಮಾರ್ಗದಿಂದ ಕರೆತಂದು, ಬೆಂಗಳೂರು ನಗರದ ಸಿಗ್ನಲ್‌ಗಳಲ್ಲಿ ಭಿಕ್ಷಾಟನೆ ಮಾಡಿಸುತ್ತಿದ್ದರೂ, ಸ್ಥಳೀಯ ಭಿಕ್ಷಾಟನೆ ನಿಷೇದಾಧಿಕಾರಿಗಳಾಗಿರುವ ಸಮಾಜ ಕಲ್ಯಾಣ ಇಲಾಖೆ, ಮತ್ತಿತರ ಇಲಾಖೆಯ ಅಧಿಕಾರಿಗಳು ನಿಯಂತ್ರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ;

(ಆ) ತಾಯಿ ಮತ್ತು ಮಗುವನ್ನು ಒಮ್ಮೆಗೆ ಬಂಧಿಸಿದ್ದಲ್ಲಿ, ಮಗು ಮತ್ತು ತಾಯಿಯನ್ನು ಬೇರ್ಪಡಗೊಳಿಸಿ, ಪ್ರತ್ಯೇಕವಾಗಿ ಬಂಧನದಲ್ಲಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ ವೈದ್ಯರ ಕೊರತೆ ಕುರಿತು

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)**

೯೬(೮೩೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ನೂತನವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕುಂದಾಪುರದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೯೭(೮೦೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ತಾಲ್ಲೂಕಿನ ಕೋಟೇಶ್ವರ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಾಗೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆ ಪ್ರಾರಂಭಗೊಂಡಿದ್ದು ಯಾವಾಗ ; ಸದರಿ ಶಾಲೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಸದರಿ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ತರಗತಿವಾರು ವಿವರ ನೀಡುವುದು)

(ಇ) ಸದರಿ ಶಿಕ್ಷಣ ಸಂಸ್ಥೆಗೆ ನಿವೇಶನ ಹಾಗೂ ಕಟ್ಟಡ ಮಂಜೂರಾಗಿ ಹಲವಾರು ವರ್ಷಗಳು ಸಂದರೂ, ಇಲ್ಲಿಯತನಕ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು ; ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ ?

## ಹೆಸರುಕಾಳು ಪ್ಯಾಕೇಟ್ ವಿತರಣೆಯಲ್ಲಿನ ಲೋಪಗಳ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೯೮ (೮೨೦) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುತ್ತಿರುವ "ಹೆಸರುಕಾಳು" ಪ್ಯಾಕೇಟ್‌ನಲ್ಲಿ ೧ ಕೆ.ಜಿ. ಬದಲು ೭೫೦ ಗ್ರಾಂ, ೮೦೦ ಗ್ರಾಂ. ಅಥವಾ ೧ ಕೆ.ಜಿ. ಗಿಂತ ಕಡಿಮೆ ಪ್ರಮಾಣದಲ್ಲಿ ಹೆಸರುಕಾಳನ್ನು ವಿತರಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಲೋಪದೋಷಕ್ಕೆ ಕಾರಣರಾದವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ? (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

## ಚೈನೀಸ್ ರೆಸ್ಟೋರೆಂಟ್‌ಗಳಲ್ಲಿ ಹಾಗೂ ಬೀದಿ ಬದಿಯಲ್ಲಿ ಮಾಡುವ ಗೋಬಿ ಮಂಚೂರಿ ಮತ್ತು ಫ್ರೈಡ್ ರೈಸ್ ಮೊದಲಾದ ಆಹಾರಗಳಲ್ಲಿ ರಾಸಾಯನಿಕ ವಸ್ತುಗಳ ಬಳಕೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)**

೯೯ (೮೭೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾಮಾನ್ಯವಾಗಿ ಕೆಲವು ಚೈನೀಸ್ ರೆಸ್ಟೋರೆಂಟ್‌ಗಳಲ್ಲಿ ಹಾಗೂ ಬೀದಿ ಬದಿಯಲ್ಲಿ ಮಾರುವ ಗೋಬಿ ಮಂಚೂರಿ, ಫ್ರೈಡ್ ರೈಸ್ ಮೊದಲಾದ ಆಹಾರ ಪದಾರ್ಥಗಳಲ್ಲಿ ಟೇಸ್ಟಿಂಗ್ ಪೌಡರ್ ಮತ್ತು ಇನ್ನಿತರ ರಾಸಾಯನಿಕ ವಸ್ತುಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆ ವಸ್ತುಗಳು ಯಾವುವು ; ಇದರಿಂದ ಆಗುವ ಅನುಕೂಲ ಅನಾನುಕೂಲಗಳೇನು ;

(ಇ) ಇದನ್ನು ಪ್ರಮುಖವಾಗಿ ಯಾವ ಕಾರಣಕ್ಕಾಗಿ ಮಾರುಕಟ್ಟೆಯಲ್ಲಿ ಬಿಡುಗಡೆ ಮಾಡಲಾಗಿದೆ ?

## ಕೇಂದ್ರ ಸರ್ಕಾರ ನಿಯೋಜಿಸಿದ "ಸಬಲಾ" ಕಾರ್ಯಕ್ರಮದ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)**

೧೦೦ (೮೪೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ನಿಯೋಜಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ "ಸಬಲಾ" ಕಾರ್ಯಕ್ರಮವನ್ನು ಕಳೆದ ಆರ್ಥಿಕ ವರ್ಷದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ;

(ಆ) ಕೇಂದ್ರ ಸರ್ಕಾರದಿಂದ ಈ ಯೋಜನೆಗೆ ಬಿಡುಗಡೆಯಾದ ಹಣವೆಷ್ಟು ; ಖರ್ಚು ಮಾಡಲಾದ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯನ್ನು ಕಳೆದ ವರ್ಷ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; ಹಾಗೂ ಈ ಕಾರ್ಯಕ್ರಮಕ್ಕೆ ಬಿಡುಗಡೆ ಮಾಡಿದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯನ್ನು ಈ ವರ್ಷ ಯಾವ ಯಾವ ಜಿಲ್ಲೆಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ ; ಇಲ್ಲವಾದಲ್ಲಿ, ಆರಂಭಿಸದಿರಲು ಇರುವ ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)

## ಮೊರಾರ್ಜಿ ಹಾಗೂ ಕಿತ್ತೂರ ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೂ ಒಂದು ಹೆಚ್ಚುವರಿ ವೇತನ ಬಡ್ತಿ ಜಾರಿ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ)**

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು)**

೧೦೧ (೮೬೮+೮೬೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳು, ಪದವಿ ಪೂರ್ವ ಉಪನ್ಯಾಸಕರು, ಪ್ರಾಚಾರ್ಯರು, ಇವರೆಲ್ಲರ ತತ್ಸಮಾನ ಶ್ರೇಣಿಯ ಶಿಕ್ಷಕರಿಗೆ ವೇತನ ತಾರತಮ್ಯ ಸರಿಪಡಿಸಲು ಒಂದು ಹೆಚ್ಚುವರಿ ವೇತನ ಬಡ್ತಿ ನೀಡಿ ಆದೇಶ ಮಾಡಿದ್ದು, ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೂ ಜಾರಿ ಕುರಿತು ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರದ ನಿಲುವು ಹಾಗೂ ಕ್ರಮಗಳೇನು ; ಯಾವ ಕಾಲ ಮಿತಿಯೊಳಗೆ ಅದನ್ನು ನೀಡಲಾಗುವುದು ;

(ಆ) ಸಾರ್ವಜನಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಗೆ ದೊರೆಯುತ್ತಿರುವ ಸೇವಾ ಸೌಲಭ್ಯಗಳು ಯಾವುವು ; ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಸದರಿ ಸೌಲಭ್ಯಗಳು ದೊರಕದಿರಲು ಕಾರಣವೇನು ; ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರದ ಕ್ರಮಗಳೇನು ?

## ಕುಳಗೇರಿಯ ನವೋದಯ ವಸತಿ ಶಾಲೆ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)**

೧೦೨ (೮೫೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿಯ ನವೋದಯ ವಸತಿ ಶಾಲೆಯಲ್ಲಿ ೫೦೦ ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದು, ಸುಮಾರು ೫೦ ಕ್ಕೂ ಹೆಚ್ಚು ಸಿಬ್ಬಂದಿ ವರ್ಗದ ಕುಟುಂಬಗಳು ವಾಸಿಸುತ್ತಿದ್ದು, ಕಳೆದ ಒಂದು ತಿಂಗಳಿಂದ ಕುಡಿಯುವ ನೀರಿಗಾಗಿ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕ್ಕಪಕ್ಕದ ಜಮೀನುಗಳಲ್ಲಿ ನೀರಾವರಿ ಸೌಲಭ್ಯವಿದ್ದರೂ, ಶಾಲೆಗೆ ಟ್ಯಾಂಕರ್ ಮೂಲಕ ನೀರು ಒದಗಿಸುತ್ತಿರುವುದು ಕಂಡುಬಂದಿದ್ದು, ಶಾಶ್ವತ ನೀರಿನ (ಕೊಳವೆಬಾವಿ ಮುಖಾಂತರ) ವ್ಯವಸ್ಥೆ ಕಲ್ಪಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು ?

## ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರದ ಅನುದಾನದ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೦೩ (೮೪೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅಂಗನವಾಡಿ ಕಾಮಗಾರಿ ಮಂಜೂರು ಆಗಿದ್ದು ಯಾವಾಗ ; ಅಂದಾಜು ವೆಚ್ಚ ಎಷ್ಟು ; (ತಾಲ್ಲೂಕುವಾರು ಅಂಗನವಾಡಿಗಳ ವಿವರ ನೀಡುವುದು) ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿದೆ ; ಉಳಿದ ಅಂಗನವಾಡಿಗಳ ಕಾಮಗಾರಿಗಳು ಪೂರ್ಣಗೊಳ್ಳುವುದು ಯಾವಾಗ ;

(ಆ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಸ್ವಂತ ನಿವೇಶನವಿಲ್ಲದ ಕಾರಣ ದೇವಸ್ಥಾನದಲ್ಲಿ ಅಂಗನವಾಡಿಗಳು ನಡೆಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಜಿಲ್ಲೆಯ ಅಂಗನವಾಡಿಗಳಿಗೆ ಪ್ರತಿ ತಿಂಗಳು (ಬಾಡಿಗೆ) ನೀಡುತ್ತಿರುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿನ ಅಪೌಷ್ಟಿಕ ಮಕ್ಕಳ ಸಂಖ್ಯೆ ಎಷ್ಟು ; ಅಪೌಷ್ಟಿಕತೆ ಸಂಖ್ಯೆ ಕಡಿಮೆ ಮಾಡಲು ಕೈಗೊಂಡಿರುವ ಕ್ರಮಗಳೇನು ; ಬೀದರ್ ಜಿಲ್ಲೆಯ ಅಂಗನವಾಡಿಗಳಿಗಾಗಿ ಪ್ರತಿ ತಿಂಗಳು ನೀಡುತ್ತಿರುವ ಅನುದಾನವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಉಚಿತ ಆರೋಗ್ಯ ಯೋಜನೆ ಹಿಂಪಡೆದುಕೊಂಡಿರುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೦೪ (೪೭೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾನಾ ಯೋಜನೆಗಳಡಿಯಲ್ಲಿ ಚಿಕಿತ್ಸಾ ವೆಚ್ಚವನ್ನು ರಾಜ್ಯ ಸರ್ಕಾರವು ಬಾಕಿ ಉಳಿಸಿಕೊಂಡಿರುವುದರಿಂದ ರಾಜ್ಯದ ಬಹುತೇಕ ಖಾಸಗಿ ಆಸ್ಪತ್ರೆಗಳು, ಮೂರು ಪ್ರಮುಖ ಉಚಿತ ಆರೋಗ್ಯ ಯೋಜನೆಗಳನ್ನು ಹಿಂಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರವು ಬಾಕಿ ಉಳಿಸಿಕೊಂಡಿರುವ ಚಿಕಿತ್ಸೆಯ ಮೊತ್ತವೆಷ್ಟು ;

(ಇ) ಚಿಕಿತ್ಸೆ ವೆಚ್ಚವನ್ನು ಬಾಕಿ ಉಳಿಸಿಕೊಂಡಿರುವುದಕ್ಕೆ ಕಾರಣಗಳೇನು ;

(ಈ) ಸರ್ಕಾರದ ಈ ನಿರ್ಲಕ್ಷ್ಯದಿಂದ ಸಾಮಾನ್ಯ ಜನರು ಪರದಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ವಸತಿ ನಿಲಯದ ಸಂಖ್ಯಾಬಲ ಹೆಚ್ಚಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೦೫ (೭೬೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಾದಗಿರಿ ಜಿಲ್ಲೆ, ಶ್ರೀ ಚರಬಸವೇಶ್ವರ ಗ್ರಾಮೀಣ ಬಾಲಕಿಯವರ ವಸತಿ ನಿಲಯದಲ್ಲಿ ಸಂಖ್ಯಾಬಲ ಹೆಚ್ಚಿಸಲು ಸಂಘದಿಂದ ಪ್ರಸ್ತಾವನೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲ್ಲಿಯವರೆಗೆ ಯಾವುದೇ ನಿರ್ಧಾರ ಕೈಗೊಳ್ಳದಿರಲು ಕಾರಣವೇನು ;

(ಇ) ಸಂಖ್ಯೆ ಹೆಚ್ಚಿಸಲು ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 1113 - ಪಿ8 - 1500 ಪ್ರತಿಗಳು